ಮೈಸೂರ ಗೆಜೆಟ್.

ನಂ. 20 ಸರ್ಕಾರದಿಂದ ಪ್ರಕಾಶಿಸಲ್ಪಟ್ಟದ್ದು. ಸನ್ 1889.

ಬೆಂಗಳೂರು, ಶನಿವಾರ, ಮೇ ತಾ|| 18, ಸನ್ 1889.

ಸೂಚನೆ. ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾನಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೇ ವ ಇನಾಂ ಸೂಪರ್ಟಿಂಡೆಂಟರು, ಕಾಂವೆಟ್ರೋಲರವರು, ಪಬ್ಲಿಕ್ ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ಸ್ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ಸ್ ಜಡ್ಜ್‌ರು, ಡಿ|| ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜ್‌ರು, ಪೊಲೀಸ್ ಸೂಪರ್ಟಿಂಡೆಂಟರು, ಫಾರೆಸ್ಟು ಆಫಿಸರ್‌ಗಳು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟಾಫಿಸ್ ನೋಟಿಸುಗಳು.

3ನೇ ಭಾಗ–ಶ್ರೀಮ್ ಮಹಾರಾಜ ರಾಜಾನಾಹೆಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟ್ಸುಗಳು ವ ರೆಗ್ಯುಲೇಷನ್‌ಗಳು—ಇಲ್ಲ.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲ.

೧ನೇ ಭಾಗ.

ಶ್ರೀಮ್ ಮಹಾರಾಜ ರಾಜಾನಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆ.

ಜನರಲ್.

ಇಸ್ತಿಹಾರ್‌ನಾಮೆ.

ತಾರೀಖು 2ನೇ ಮೇ 1889.

ನಂ. 181.—ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕೀ ಸಮಾಧಾನಕ್ಕೋಸ್ಕರ ಕ್ರಮ-ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ನ ತಾರೀಖಿನಲ್ಲೂ ಬಹಿರಂಗವಾದ ಹರಾಜಿ ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳ್ಗ್ಯೆ 11 ಘಂಟೆಗೆ ಹರಾಜು ಶುರುವಾಗಿ ಆ ಳಿಕೆ ಯಾವದೂ ಇಲ್ಲದೆ ಗ್ರಾಮವು ಚಡದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಟ್ರ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗ ಪೈಕಿ ಕೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಸಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀತ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಸಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದರೆ, ಹರಾಜು ಮುವುಕೂಫ್ ಮಾಡಲ್ಪಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜ್ ಖಾಯಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಸಾವತಿ ಮಾಡಿ, ಹರಾಜನ್ನ ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಧರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು, ಡಿಪ್ಯೂಟಿ ಕಮ್ಮಿಷನರವರಿಂದ ರುಜು ವೊಹರ್ ಮಾಡೋಣಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲನಲ್ಲಾಗಲಿ ಅಂದಾಜು ಬೀಜವರೀ ವಿಷಯದಲ್ಲಾಗಲಿ, ಇರುವ ಗಲ್ಲತಗಳಿಗೆ ಸರಕಾರವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾ ಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲಿನಲ್ಲಿ ಆಗುವ ಆಬ್ಜೆರ್ ಹುಕುಮಿಗೆ ಸದರೀ ಕ್ರಯವು ಒಳಪಟ್ಟು ಯಿರುತ್ತೆ.

ತಿಪ್ಟೂರು ತಾಲ್ಲೂಕು.	ಹೋಬಳಿ.	ಗ್ರಾಮ.	ಜೋಡೀದಾರರ ಹೆಸರು.	ಅಂದಾಜು ಬೀಜವರಿ.	ಅಂದಾಜು ಹುಟ್ಟುವಳಿ ಯಾಜೇಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಟೆರೆಂಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಟ್ಟಿತ್ತೋ ಅಂಥಾ ಸರಕಾರ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಕೋಬಾರ.	ನಾಲೂರು.	ನಾನ್ಸೆ		ಎಕರೆ. ಸೆಂ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ	
		ಮಾವಸಂದ್ರ	ಕೇಪಾರ್ಜುರ್ ವಗೈರೆ	200 0 0	90 0 0	70 5 10	336 11 9 ಮತ್ತು ಬಡ್ಡಿ.	1889ನೇ ಇಸವಿ ಜೂನ್ ತಾರೀಖು 14ರಲ್ಲು ತಾಲ್ಲೂಕು ಕಚ್ಚೇರಿಯಲ್ಲಿ ಅಮಲ್ದಾರ್ರರೂಬರೂ.

ಷರಾ.—ಜೋಡೀದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಲಾಗಲಿ, ಉಂಟುಮಾಡಲ್ಪಟ್ಟ ತವಾಂ ಹಿಡುವಳಿಗಳಿಗೂ, ದೇಣಿಗೆಗಳಿಗೂ ಮತ್ತು ಹಕ್ಕುಗಳಿಗೂ ಅಥವಾ ಮತ್ತ್ಯಾವ ಸಂಬಂಧಗಳಿಗೂ ಸದರೀ ಹರಾಜು ವಳಪಟ್ಟಿರುವದಿಲ್ಲ.

ತಾರೀಖು 1ನೇ ಮೇ 1889.

ನಂ. 693—75.—ಶಿವಮೊಗ್ಗಾ ಡಿಸ್ಟ್ರಿಕ್ಟ್ ಡಿಪ್ಯೂಟಿ ಕಮ್ಮಿಷನರ್ ಮೆ|| ವಿ. ಟಿ. ಮಾಧವರಾಯರವರಿಗೆ, 1889ನೇ ಇಸವಿ ಮಾರ್ಚಿ 18ನೇ ಮುಕ್ತುಂ 2075ನೇ ನಂಬರ್‌ವುಳ್ಳ ಇಸ್ತಿಹಾರಿನಿಂದ ಕೊಡೋಣಾಗಿದ್ದ ಹದಿನೈದು ದಿವಸಗಳ ಕ್ಯಾಜ್ಯುಯಲ್ ರಜಾವನ್ನ ಅವರ ಅಪೇಕ್ಷೇನೇರಿಗೆ ರದ್ದು ಮಾಡೋಣಾಗಿರುತ್ತೆ.

ನಂ. 695—76.—ಹಿರಿಯೂರು ತಾಲ್ಲೂಕು ಅಮಲ್ದಾರ್ ಸುಬ್ಬರಾವ್‌ನಾಯಡು ಯವರಿಗೆ, ಆವರು ವೈಪಯೋಗಿಸಿಕೊಳ್ಳುವ ತಾರೀಖು ಲಾಗಾಯತು ಮೂಂದು ತಿಂಗಳ ಪ್ರಿವಿಲೇಜ್ ರಜಾ ಕೊಡೋಣಾಗಿರುತ್ತೆ.

ಸುಬ್ಬರಾವ್‌ನಾಯಡುಯವರು ರಜಾದ ಮೇಲೆ ಇರುವ ಪರ್ಯಂತ ಯಾ ಮತ್ತೊಂದು ಹುಕುಂ ಕೊಡುವವರಿಗೆ ಹೊಸದುರ್ಗದ ಡಿಪ್ಯೂಟಿ ಅಮಲ್ದಾರ್ ವೆಂಕಟರಾಯರು ಹಿರಿಯೂರು ತಾಲ್ಲೂಕಿನ ಚಾರ್ಜ್ ವಹಿಸಿಕೊಂಡು 3ನೇ ಕ್ಲಾಸ್ ಮಾಜಿಸ್ಟ್ರೇಟರ ಅಧಿಕಾರಗಳನ್ನೆ ಚಲಾಯಿಸತಕ್ಕದ್ದು.

ವೆಂಕಟರಾಯರು ಇತರ ಕೆಲಸದ ಮೇಲೆ ಯಿರುವ ಪರ್ಯಂತ ಯಾ ಮತ್ತೊಂದು ಹುಕುಂ ಕೊಡುವವರವಿಗೂ, ಚಿತ್ರದುರ್ಗ ಡಿಸ್ಟ್ರಿಕ್ಟ್ ಆಕ್ಟಿಂಗ್ ರವಿನ್ಯೂ ಪೆಷ್ ಮುನಷೀ ಅಬ್ದುಲ್‌ರಹಿಂ ಮೇಕ್ರಿ ಬಿ. ಎ. ಯವರು ಹೊಸದುರ್ಗದ 1ನೇ ಗ್ರೇಡ್ ಡೆಪ್ಯೂಟಿ ಅಮಲ್ದಾರ ವ 3ನೇ ಕ್ಲಾಸ್ ಮಾಜಿಸ್ಟ್ರೇಟ್ ಕೆಲಸವನ್ನು ಆಕ್ಟಿಂಗ್ ತರೀಕು ನೋಡುವಂತೆ ಮೊಕರರ್ರಾಜಲ್ಪಟ್ಟಿರುತ್ತಾರೆ.

ನಂ. 697—77.—ಮೈಸೂರು ೫ೇಮೆಯ ಕಾಂಟ್ರೊಲರ್ ಮೆ॥ ರಂಗಸ್ವಾಮಯ್ಯಂಗಾರ್ರವರಿಗೆ, 1889ನೇ ಇಸವಿ ಜನವರಿ 26ನೇ ಮರ್ತು ವಿನ 2014ನೇ ನಂಬರ್ ಇಸ್ತಿಹಾರಿನಿಂದ ಕೊಡೋಣಾಗಿದ್ದ 12 ದಿವಸಗಳ ಪ್ರಿವಿಲೀಜ್ ರಜಾವನ್ನ ಅದೇ ತಿಂಗಳು 31ನೇ ತಾರೀಖ್ ಲಾಗಾಯತು ಉಪಯೋಗಿಸಿಕೊಂಡು ಫಿಬ್ರವರಿ 14ನೇ ತಾರೀಖಿನ ಪೂರ್ವಾನ್ನದಲ್ಲಿ ಕೆಲಸದ ಮೇಲೆ ಪುನ್ಹ ಎಂವಿರುತ್ತಾರಾಗಿ, ಸದರೀ ರಜಾಕ್ಕೆ ಜಾಸ್ತೀಯಾಗಿ ಇನ್ನೂ ಯರಡು ದಿವಸಗಳ ರಜಾ ಕೊಡಲ್ಪಟ್ಟಿರುತ್ತದೆ.

ತಾರೀಖು 3ನೇ ಮೇ 1889.

ನಂ. 28.—ಬೆಂಗಳೂರು ಫಾರೆಸ್ಟ್ ಅಸಿಸ್ಟೆಂಟ್ ಕ್ಯೂರೇಟರ್ ಮೆ॥ ಸಿ. ನಾರಾಯಣರಾಯರು ತಮ್ಮ ಆಫಿಸಿನ ಚಾರ್ಜನ್ನ ಮೆ॥ ಯಚ್. ಬಿ. ಕ್ಯಾರ್ಕ್ಟ್ ಯವರಿಗೆ 1889ನೇ ಇಸವಿ ಏಪ್ರಿಲ್ ತಾರೀಖು 17ರಲ್ಲು ವ್ಯಪ್ತಿಸಿರುತ್ತಾರೆ.

ತಾರೀಖು 6ನೇ ಮೇ 1889.

ನಂ. 29.—ಮೈಸೂರು ಡಿಸ್ಟ್ರಿಕ್ಟ್ ಪೈಕಿ ಹುಣಸೂರು ತಾಲ್ಲೂಕು ಅಮಲ್ದಾರ್ ಮಿರ್ ಕಮಾಲುದ್ದೀನ್ ಅಲ್ಲೀಬ್ಹಾರಿಗೆ, ಅವರು ಉಪಯೋಗಿಸಿಕೊಳ್ಳುವ ತಾರೀಖ್ ಲಾಗಾಯತು 15 ದಿವಸಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತದೆ.

ತಾರೀಖು 21ನೇ ಡಿಸಂಬರ್ 1888.

ಕಾರ್ಯಾರ್ಥ ದಿವಾನರವರನ್ನು, ಭೇಟಿ ಮಾಡುವದಕ್ಕೆ ಅಪೇಕ್ಷಿಸುವ ದೊಡ್ಡಮನುಷ್ಯರು ಶುಕ್ರವಾರಗಳಲ್ಲಿ ಮಧ್ಯಾನ್ಹಾತ್ಪರ 2 ಘಂಟೆಗೆ ಕಛೇರಿಗೆ ಬರತಕ್ಕದ್ದು. ಈ ಬಗ್ಯಾಗಿ ಹಿಂದಿನ ದಿನ ಚೀಫ್ ಸೆಕ್ರಿಟೆರಿಯವರಿಗೆ ತಮ್ಮ ಕಾರ್ಡ್‌ಗಳನ್ನು ಕಳುಹಿಸತಕ್ಕದ್ದು.

2. ಬೆಂಗಳೂರಲ್ಲಿ ಈ ಆಫಿಸಿನಲ್ಲಿಯಿಡಲ್ಪಟ್ಟಿರುವ ಅರ್ಜೀಪೆಟ್ಟಿಗೆಯು ದಿನವಹೀ ಚೀಫ್ ಸೆಕ್ರಿಟೆರಿಯವರಿಂದಲೂ, ಆವರು ಬೆಂಗಳೂರಲ್ಲಿ ಯಿಲ್ಲದ ಕಾಲದಲ್ಲಿ ಅಂಡರ್ ಸೆಕ್ರಿಟೆರಿಯವರಿಂದಲೂ ಮಧ್ಯಾನ್ಹ 12 ಘಂಟೆಗೆ ತೆಗಿಯಲ್ಪಟ್ಟು ಅದರಲ್ಲಿನ ಅರ್ಜಿಗಳು ತೆಗದುಕೊಳ್ಳಲ್ಪಡುವದು.

3. ಅರ್ಜಿದಾರರುಗಳು ಶುಕ್ರವಾರ ದಿವಸ ಮಧ್ಯಾನ್ಹಾತ್ಪರ 3 ಘಂಟೆಗೆ ಕಛೇರಿಯಲ್ಲಿ ಕೇಳಲ್ಪಡುವರು.

ಬಿಮೋಜೇಬ್ ಹುಕುಂ,
ಆರ್. ವಿಜಯಿಂದ್ರರಾವ್,
ಚೀಫ್ ಸೆಕ್ರಿಟೆರಿ.

ದಿವಾನರವರು, ಅವರ ಭೇಟಿ ಮಾಡಲಿಚ್ಛೈಯುಳ್ಳ ದೊಡ್ಡಮನುಷ್ಯರುಗಳನ್ನು ಪ್ರತಿ ಶನಿವಾರದ ದಿವಸ ಮಧ್ಯಾನ್ಹ 12 ಘಂಟೇ ಲಾಗಾಯತು 2 ಘಂಟೆ ಪರಯಂತ ತಮ್ಮ ನಿವಾಸಸ್ಥಾನದಲ್ಲಿ ಬರಮಾಡಿಕೊಳ್ಳುವರು.

ನೇಟಿವ್ ದೊಡ್ಡಮನುಷ್ಯರುಗಳು ಅವರಿಗೆ ಯಿಷ್ಟವಿರುವ ಪಕ್ಷಕ್ಕೆ ಅದೇ ದಿವಸ ಮಧ್ಯಾನ್ಹಾತ್ಪರ 3 ಘಂಟೆಗೆ ಬರಬಹುದು.

ಹುಕುಂ ಬಿಮೋಜೇಬ್,
ಕೆ. ದೊರಸಾಮಿಅಯ್ಯರ್,
ಪ್ರೈವೇಟ್ ಸೆಕ್ರಿಟೆರಿ.